**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆ: 4462/2022**

**ಫಿರ್ಯಾದಿ ಃ- ರಾಜ್ಯದ ಪರವಾಗಿ ಬಿಳಿಗೆರೆ ಪೋಲೀಸ್ ಠಾಣೆ,**

**ವಿರುದ್ಧ**

**ಆರೋಪಿ ಃ-** ರವಿ, ಬಿನ್.ಬಸವೇಗೌಡ , 33 ವರ್ಷ,
ಬಿಳಿಗೆರೆ ಗ್ರಾಮ, ನಂಜನಗೂಡು ತಾಲ್ಲೂಕು

**ಆ ಪಾ ದ ನೆ**

*ಶ್ರೀ ಕಿಶೋರ್ ಕುಮಾರ್ ಎಂ., 1ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್‌ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿಃ26.01.2022 ರಂದು ಬೆಳಗ್ಗೆ 11.00 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿನ ಗೋಣಹಳ್ಳಿ ಗ್ರಾಮದ ಹಳೇ ಸ್ಕೂಲ್ ಮನೆಯ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಆರೋಪಿತರಾದ ನೀವು ಒಟ್ಟು 1735/- ರೂ. ಬೆಲೆ ಬಾಳುವ ಒಟ್ಟು 3600 ಮಿ.ಲೀ. ಮದ್ಯ ಇರುವ 180 ಎಂ.ಎಲ್.ನ 20 ಓಲ್ಡ್ ಅಡ್ಮಿರಲ್ ಬ್ರಾಂಡಿ ಪೌಚ್‌ಗಳನ್ನು ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ತಮ್ಮ ಅಕ್ರಮ ಸ್ವಾಧೀನದಲ್ಲಿ ಇಟ್ಟುಕೊಂಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ **ಅಬಕಾರಿ ಕಾಯಿದೆ ಕಲಂ** 32(1) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುವಿರೆಂದು ಈ ಮೂಲಕ ಆಪಾದಿಸುತ್ತೇನೆ.

ಕೊನೆಯದಾಗಿ ಮೇಲ್ಕಂಡ ದಿನಾಂಕ, ಸ್ಥಳ ಹಾಗೂ ವೇಳೆಯಲ್ಲಿ ಆರೋಪಿತರಾದ ನೀವು **ಅಕ್ರಮವಾಗಿ** 180 ಎಂ ಎಲ್ ನ 20 ಓಲ್ಡ್ ಅಡ್ಮಿರಲ್ ಬ್ರಾಂಡಿ ಮದ್ಯವನ್ನು **ಇಟ್ಟುಕೊಂಡು ಯಾವುದೇ ತೆರನಾದ ಪರವಾನಗಿಯಿಲ್ಲದೆ ಅಕ್ರಮವಾಗಿ** ಮಾರಾಟ ಮಾಡುವ

ಉದ್ದೇಶದಿಂದ ನಿಮ್ಮ ಸ್ವಾಧೀನದಲ್ಲಿ ಇಟ್ಟುಕೊಂಡಿರುತ್ತೀರಿ, ಆದ್ದರಿಂದ ಅಬಕಾರಿ ಕಾಯಿದೆ ಕಲಂ.34ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುವಿರೆಂದು ನಿಮ್ಮ ಮೇಲೆ ಈ ಮೂಲಕ ಆಪಾದಿಸುತ್ತೇನೆ.

ಪ್ರಶ್ನೆ.1- ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ ಃ

ಪ್ರಶ್ನೆ.2- ನೀವು ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ತೆರೆದ ನ್ಯಾಯಾಲಯದಲ್ಲಿ ದಿಃ10.01.2024 ರಂದು ದೃಢೀಕರಿಸಿದ್ದೇನೆ.)

1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ನಂಜನಗೂಡು